248 (484) – ಶ್ರೀ ಪ್ರಭಾಕರ ಬಂಗೇರ ಕೆ. (ಬೆಳ್ತಂಗಡಿ) – ಮಾನ್ಯ ಉಪ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳ್ತಂಗಡಿ ತಾಲ್ಲೂಕು ವ್ಯಾಪ್ತಿಯಲ್ಲಿ ಸಣ್ಣ ನೀರಾವರಿ ಇಲಾಖೆಯು ಗುರುತಿಸಿರುವ ಕೆರೆಗಳ ಸಂಖ್ಯೆ ಎಷ್ಟು ;

ಆ) ಅವುಗಳಲ್ಲಿ ಎಷ್ಟು ಕೆರೆಗಳನ್ನು ಇಲ್ಲಿಯವರೆಗೆ ಅಭಿವೃದ್ಧಿಪಡಿಸಲಾಗಿದೆ ಹಾಗೂ ಉಳಿದ ಕೆರೆಗಳ ಅಭಿವೃದ್ಧಿಗಾಗಿ ಸರ್ಕಾರ ಕೈಗೊಂಡ ಕ್ರಮಗಳೇನು ;

ಇ) ಆರ್ಥಿಕ ಸಾಲಿನಲ್ಲಿ ಸಣ್ಣ ನೀರಾವರಿ ಇಲಾಖೆಯು ತಾಲ್ಲೂಕು ವ್ಯಾಪ್ತಿಯಲ್ಲಿ ಅನುಷ್ಠಾನಗೊಳಿಸಿದ ಕಾಮಗಾರಿಗಳ ಅನುದಾನದ ವಿವರಗಳೇನು ?

ಶ್ರೀ ಬಿ.ಎಸ್. ಯಡಿಯೂರಪ್ಪ (ಉಪ ಮುಖ್ಯಮಂತ್ರಿಗಳು ಹಾಗೂ ಸಣ್ಣ ನೀರಾವರಿ)–

ಅ) ಬೆಳ್ತಂಗಡಿ ತಾಲ್ಲೂಕು ವ್ಯಾಪ್ತಿಯಲ್ಲಿ ಸಣ್ಣ ನೀರಾವರಿ ಇಲಾಖೆಯ ಅಧೀನದಲ್ಲಿ ಬರುವ ಕೆರೆಗಳು ಯಾವುದೂ ಇರುವುದಿಲ್ಲ.

ಆ) ಪ್ರಶ್ನೆ ಉದ್ಭವಿಸುವುದಿಲ್ಲ.

ಇ) ಪ್ರಸಕ್ತ ಸಾಲಿನಲ್ಲಿ ಅನುಷ್ಠಾನದ ಹಂತದಲ್ಲಿರುವ ಕಾಮಗಾರಿಗಳ ಅನುದಾನದ ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ.

249 (485) – ಶ್ರೀ ಪ್ರಭಾಕರ ಬಂಗೇರ ಕೆ. (ಬೆಳ್ತಂಗಡಿ) – ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಾಹಿತಿ ಸಿಂಧು ಯೋಜನೆಯನ್ವಯ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಈವರೆಗೆ ಎಷ್ಟು ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಲ್ಲಿ ಕಂಪ್ಯೂಟರ್ ಶಿಕ್ಷಣವನ್ನು ಒದಗಿಸಿಕೊಡಲಾಗಿದೆ (ತಾಲ್ಲೂಕುವಾರು ವಿವರ ನೀಡುವುದು) ;

ಆ) 2005-06 ಮತ್ತು 2006-07ನೇ ಸಾಲಿನಲ್ಲಿ ಎಷ್ಟು ಶಾಲೆಗಳಿಗೆ ಸದರಿ ಯೋಜನೆಯ ಸೌಲಭ್ಯವನ್ನು ಒದಗಿಸಲಾಗಿದೆ ;

ಇ) ಗ್ರಾಮಾಂತರ ಪ್ರದೇಶದಲ್ಲಿರುವ ಶಾಲೆಗಳಿಗೆ ಪ್ರಥಮ ಆದ್ಯತೆ ನೀಡುವ ಮೂಲಕ ಆಧುನಿಕ ಶಿಕ್ಷಣದ ಸೌಕರ್ಯವನ್ನು ಪಡೆಯಲು ಅನುಕೂಲ ಮಾಡಿಕೊಡುವ ದಿಶೆಯಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು ?